ಎಂ ವಿ ಸಿ ನಂಃ 234/2023
ಪಿ. ಡಬ್ಲ್ಯೂ-1

**(ಇಂದು ದಿನಾಂಕ 30-10-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು)**

**ಪಾಟೀಸವಾಲುಃ 2 ನೇ ಎದುರುದಾರರ ಪರ ಶ್ರೀಮತಿ ಆರ್ ಜೆ ಪಿ ವಕೀಲರಿಂದ**

ಅಪಘಾತದ ಸಮಯದಲ್ಲಿ ನಾನು ಮತ್ತು ಶಿವಾನಂದ ಜಂಪಣ್ಣವರ ರಸ್ತೆ ಬದಿ ಮೂತ್ರ ವಿಸರ್ಜನೆಗೆ ನಿಂತಿದ್ದೆವು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಅಪಘಾತದ ಸಮಯದಲ್ಲಿ ನಾವು ನಮ್ಮ ಮೋಟರ ಸೈಕಲನ್ನು ಲಕ್ಕುಂಡಿ ಸರ್ಕಾರಿ ಆಸ್ಪತ್ರೆಯ ಬಳಿ ಗದಗ ಹಾತಲಗೇರಿ ರಸ್ತೆಯ ಎಡಬದಿಯಲ್ಲಿ ನಿಲ್ಲಿಸಿಕೊಂಡಿದ್ದೆವು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆಸರಿಯಲ್ಲ . ಮೋಟರ ಸೈಕಲ ನಂಃ ಕೆಎ-26-ಇಎಫ್-6742 ಇದರ ಸವಾರ ಅತೀ ವೇಗವಾಗಿ ಮತ್ತು ಅಜಾರೂಕತೆಯಿಂದ ಚಲಾಯಿಸಿಕೊಂಡು ಬಂದು ರಸ್ತೆಯ ಬದಿಗೆ ನಿಂತಿದ್ದ ನಮಗೆ ಡಿಕ್ಕಿಹೊಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಅಪಘಾತದ ಪರಿಣಾಮ ತೀವ್ರ ಸ್ವರೂಪದ ಗಾಯಗಳು ಉಂಟಾದವು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ .

ಅಪಘಾತದ ಸಮಯದಲ್ಲಿ ನಾನು , ಶಿವಾನಂದ ಹಾಗೂ ಕಾರ್ತಿಕ ಒಂದೇ ಮೋಟಾರ ಸೈಕಲನಲ್ಲಿ ಸವಾರಿ ಮಾಡುತ್ತಿದ್ದೆವು ಎಂದರೆ ಸರಿಯಲ್ಲ . ಅಪಘಾತದ ನಂತರ ಗದಗ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದೇನೆ ಎಂದರೆ ಸರಿ . ನಾನು ವೈದ್ಯರ ಮುಂದೆ ಮೋಟಾರ ಸೈಕಲಿನಿಂದ ಸ್ವತಃ ಬಿದ್ದಿರುವುದಾಗಿ ಹೇಳಿದ್ದು ಅದರನ್ವಯ ನಿಪಿ-7 ರಲ್ಲಿ ವಿವರಗಳನ್ನು ನಮೂದಿಸಿದ್ದಾರೆ ಎಂದರೆ ಸರಿಯಲ್ಲ . ಪೊಲಿಸರು ವರದಿ ಸಲ್ಲಿಸುವಾಗ ನಾವು ಮೂರು ಜನ ಕೆಎ-26/ಇಎಫ್-6742 ಮೋಟರ ಸೈಕಲನಲ್ಲಿ ಸವಾರಿ ಮಾಡುತ್ತಿದ್ದೆವು ಎಂದು ವರದಿ ಮಾಡಿದ್ದಾರೆ ಎಂದರೆ ಸರಿಯಲ್ಲ . ನಾನು ಹಾಜರುಪಡಿಸಿರುವ ನಿಪಿ-11 ರಲ್ಲಿ ನಾವು ಮೋಟರ ಸೈಕಲನಿಂದ ಬಿದ್ದು ಗಾಯಮಾಡಿಕೊಂಡಿದ್ದೆವೆ ಎಂದು ಬರೆದಿದ್ದಾರೆ ಎಂದರೆ ಸರಿ

. ನಾವು ಮೂರು ಜನ ಮೋಟರ ಸೈಕಲನಲ್ಲಿ ಸವಾರಿ ಮಾಡುತ್ತಿದ್ದರೂ ಸಹ ಅಪಘಾತದ ಸಮಯದಲ್ಲಿ ರಸ್ತೆಯ ಬದಿಯಲ್ಲಿ ನಿಂತಿದ್ದೆವು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ದ್ವಿವಚಕ್ರ ವಾಹನದಲ್ಲಿ ಮೂರು ಜನ ಸವಾರಿ ಮಾಡುತ್ತಿದ್ದ ಕಾರಣ ವಿಮಾ ಪಾಲಿಸಿಯ ಷರತ್ತುಗಳು ಉಲ್ಲಂಘಣೆಯಾಗಿರುವ ಕಾರಣ ನಾನು ಕೋರಿರುವಂತೆ **2** ನೇ ಎದುರುದಾರ ಪರಿಹಾರ ಪಾವತಿಸಲು ಭಾದ್ಯಸ್ಥರಲ್ಲ ಎಂದರೆ ಸರಿಯಲ್ಲ .

ಅಪಘಾತದ ನಂತರ ನಾನು ಗದಗ ಜಿಲ್ಲಾ ಆಸ್ಪತ್ರೆ ಹಾಗೂ ಸಂಕನೂರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಸಂಕನೂರ ಆಸ್ಪತ್ರೆಯಲ್ಲಿ ದಿಃ **12.02.2023** ರಿಂದ ದಿಃ **16.02.2023** ವರೆಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಅಪಘಾತದ ಪರಿಣಾಮ ನನಗೆ ಸಾದಾ ಸ್ವರೂಪದ ಗಾಯಗಳು ಆಗಿದ್ದರೂ ಸಹ ತೀವ್ರ ಸ್ವರೂಪಾದ ಗಾಯಗಳು ಆಗಿರುವುದಾಗಿ ಸುಳ್ಳು ಗಾಯದ ಪ್ರಮಾಣ ಪತ್ರ ಪಡೆದಿದ್ದಾನೆ ಎಂದರೆ ಸರಿಯಲ್ಲ . ದಿಃ **08.04.2023** ರಿಂದ **13.04.2023** ವರೆಗೆ ಗಂಗಾ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಗಂಗಾ ಆಸ್ಪತ್ರೆಯಲ್ಲಿ ತನಗೆ ಆಗಿರುವ ಗಾಯಗಳಿಗೆ ಶಸ್ತ್ರಚಿಕಿತ್ಸೆ ಮಾಡಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ದಿಃ **24.04.2024** ರಿಂದ ದಿಃ **29.04.2024** ವರೆಗೆ ಪುನಃ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಹೆಚ್ಚುವರಿ ಚಿಕಿತ್ಸೆಗಾಗಿ ಪುನಃ ದಿಃ **21.10.2024** ರಿಂದ ದಿಃ **26.10.2024** ವರೆಗೆ ಗಂಗಾ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಇಂದಿನವರೆಗೂ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ರೂ. **8** ಲಕ್ಷ ರೂಪಾಯಿ ಹಣವನ್ನು ಚಿಕಿತ್ಸೆಗಾಗಿ ವ್ಯಯ ಮಾಡಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಮುಂದುವರೆದ ಚಿಕಿತ್ಸೆಗಾಗಿ

ಎಂ ವಿ ಸಿ ನಂಃ 234/2023
ಪಿ. ಡಬ್ಲ್ಯೂ-1

ರೂ. 2 ಲಕ್ಷ ರೂಪಾಯಿ ಹಣ ಅವಶ್ಯಕತೆ ಇರುವುದಾಗಿ ವೈದ್ಯರು ಶಿಫಾರಸ್ಸು ಮಾಡಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ .

ಅಪಘಾತದ ಸಮಯದಲ್ಲಿ ನಾನು ಕೃಷಿ ಕಾರ್ಮಿಕನಾಗಿದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ನನ್ನ ಉದ್ಯೋಗ ಮತ್ತು ಆದಾಯ ತೋರಿಸುವ ದಾಖಲೆಗಳನ್ನು ಹಾಜರುಪಡಿಸಿಲ್ಲ. ಆ ರೀತಿಯ ದಾಖಲೆ ಹಾಜರುಪಡಿಸದೇ ಇದ್ದರೂ ಪ್ರತಿ ತಿಂಗಳು ತನ್ನ ಉದ್ಯೋಗದಿಂದ ರೂ. 17,000/- ಆದಾಯ ಪಡೆಯುತ್ತಿದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ . ಈಗ ನಾನು ನನಗಾಗಿರುವ ಗಾಯಗಳಿಂದ ಚೇತರಿಸಿಕೊಂಡು ಸಂಪೂರ್ಣವಾಗಿ ಗುಣಮುಖ ಹೊಂದಿದ್ದೇನೆ ಎಂದರೆ ಸರಿಯಲ್ಲ . ನಾನು ಬೇರೆ ಕಡೆ ಬಿದ್ದು ಬಂದು ಅಪಘಾತದಿಂದ ಗಾಯವಾಗಿರುವುದಾಗಿ ದಾಖಲೆಗಳನ್ನು ಸೃಷ್ಟಿ ಮಾಡಿ ತಂದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ . ನಿಪಿ-15 ನ್ನು ಸೃಷ್ಟಿ ಮಾಡಿ ತಂದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ . ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ .

**ಮರುವಿಚಾರಣೆ** ಃ ಇಲ್ಲ .

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ ,

ಪ್ರ ಹಿ ದಿ ನ್ಯಾ ಹಾಗೂ ಸಿಜೆಎಂ, ಧಾರವಾಡ.